ಇ) ಹೌದು.

**ಕುಡುಚಿ ಜನಾಂಗದವರ ಬಗ್ಗೆ**

3709 - ಶ್ರೀ ರಮಾನಾಥ ರೈ (ಬಂಟ್ವಾಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಕನಿಷ್ಟ ಹಿಂದುಳಿದಿರುವ ಕುಡುಚಿ ಜನಾಂಗದ ಜನಜೀವನದ ಬಗ್ಗೆ ಸರ್ಕಾರದಲ್ಲಿ ಮಾಹಿತಿ ದೊರೆಯುವುದೇ?

ಆ) ಮಾಹಿತಿಯದ್ದಲ್ಲಿ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಬಹಳಷ್ಟು ಹಿಂದುಳಿದಿರುವ ಈ ಪಂಗಡವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆಯೇ?

ಇ) ಇಲ್ಲವಾದಲ್ಲಿ ಈ ಬಗ್ಗೆ ಸರ್ಕಾರವು ಸೂಕ್ತ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಇಲ್ಲ.

ಇ) ಪರಿಶಿಷ್ಟ ಜಾತಿ ವರ್ಗದ ಪಟ್ಟಿಗೆ ಸೇರಿಸಬೇಕೆಂಬ ಈ ಜನಾಂಗದ ಬೇಡಿಕೆಯನ್ನು ಇದಕ್ಕಾಗಿಯೇ ರಚಿತವಾಗಿರುವ ಸಮಿತಿಯ ಮುಂದೆ ಇಡಲಾಗಿದೆ. ಸಮಿತಿಯ ಶಿಫಾರಸ್ಸಿನ ಮೇಲೆ ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳುತ್ತದೆ.

**ಹೊನ್ನಾಳಿ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು**

3717 - ಡಾ ಡಿ.ಬಿ. ಗಂಗಪ್ಪ (ಹೊನ್ನಾಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹೊನ್ನಾಳಿಯ ಸರಕಾರಿ ಆಸ್ಪತ್ರೆಯನ್ನು 50 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಪರಿಗಣಿಸಿ ಮೇಲ್ದರ್ಜೆಗೇರಿಸಲು ಸರ್ಕಾರವು ಕ್ರಮ ಕೈಗೊಂಡಿದೆಯೇ?

ಆ) ಹಾಗಿದ್ದಲ್ಲಿ ಅದು ಯಾವ ಹಂತದಲ್ಲಿದೆ?

ಶ್ರೀ ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

**ಆಂಗ್ಲೋ ಇಂಡಿಯನ್ ಜನಾಂಗವನ್ನು ಹಿಂದುಳಿದ ಪಟ್ಟಿಗೆ ಸೇರಿಸುವ ಬಗ್ಗೆ**

3745 - ಶ್ರೀ ಡೇರಿಕ್ ಎಂ.ಬಿ. ಫುಲನ್ ಷಾ (ನಾಮನಿರ್ದೇಶ ಹೊಂದಿದವರು): ಮಾನ್ಯ ಸಮಾಜಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೂರನೇ ಹಿಂದುಳಿದ ವರ್ಗಗಳ ಆಯೋಗದ ವರದಿಯ ಬಗ್ಗೆ ರಚಿಸಲಾಗಿರುವ ಸಂಪುಟ ಉಪ ಸಮಿತಿ ಅಖಿಲ ಭಾರತ ಪ್ರಗತಿಪರ ಆಂಗ್ಲೋ ಇಂಡಿಯನ್ ಸಾಮಾಜಿಕ ಸಾಂಸ್ಕೃತಿಕ ಶೈಕ್ಷಣಿಕ ಮತ್ತು ಆರ್ಥಿಕ ಕಲ್ಯಾಣ ಸಂಘದವರು ಆಂಗ್ಲೋ ಇಂಡಿಯನ್ ಸಮುದಾಯದವರನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸುವ ಸಲುವಾಗಿ ಮನವಿಯನ್ನು ಸಲ್ಲಿಸಿರುತ್ತಾರೆಯೇ?

ಆ) ಸರ್ಕಾರವು ಆಂಗ್ಲೋ ಇಂಡಿಯನರ ಆತಿ ಹಿಂದುಳಿದಿರುವಿಕೆಯನ್ನು ಗಮನಿಸಿದೆಯೇ?

ಇ) ಹಾಗಿದ್ದಲ್ಲಿ ಸದರಿ ಸಮುದಾಯದ ಏಳಿಗೆಗಾಗಿ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಹೌದು.

ಇ) ಭಾರತ ಸಂವಿಧಾನದ ಅನುಛೇದ 15(4) ಮತ್ತು 16(4) ರಂತೆ ಶೈಕ್ಷಣಿಕ ಮತ್ತು ಔದ್ಯೋಗಿಕ ಸೌಲಭ್ಯಗಳನ್ನು ಆಂಗ್ಲೋ ಇಂಡಿಯನರು "ಇ" ಗುಂಪಿನಡಿಯಲ್ಲಿ ಪಡೆಯಬಹುದಾಗಿದೆ. ಆಂಗ್ಲೋ ಇಂಡಿಯನ್ ಸಮುದಾಯದ ಜನರನ್ನು ಧಾರ್ಮಿಕ ಅಲ್ಪಸಂಖ್ಯಾತರೆಂದು ಪರಿಗಣಿಸಲಾಗಿದೆ ಮತ್ತು ಕುಟುಂಬ ವಾರ್ಷಿಕ ಆದಾಯ ರೂ 6000-00 ಗಳನ್ನು ಮೀರದಿದ್ದಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇದರ ಮೂಲಕ ಸೌಲಭ್ಯಗಳನ್ನು ಪಡೆಯಬಹುದಾಗಿದೆ.

**ಎಲ್ಲಾ ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಕಛೇರಿ ಬಗ್ಗೆ**

3739 - ಶ್ರೀ ಸಿ.ಎಂ. ಲಿಂಗಪ್ಪ (ರಾಮನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ

ಅ) ರಾಜ್ಯದಲ್ಲಿರುವ ಎಲ್ಲಾ 175 ತಾಲ್ಲೂಕುಗಳಲ್ಲಿ ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳ ಕಛೇರಿ ಅಸ್ತಿತ್ವದಲ್ಲಿದೆಯೇ?

ಆ) ಇಲ್ಲದ ಪಕ್ಷದಲ್ಲಿ ಇತರೆ ಸರ್ಕಾರಿ ಇಲಾಖೆಗಳ ತಲ್ಲೂಕು ಕಛೇರಿಗಳಂತೆ ತಾಲ್ಲೂಕು ಸಮಾಜಕಲ್ಯಾಣ ಕಛೇರಿಗಳನ್ನು ಸಹ ಎಲ್ಲಾ ತಾಲ್ಲೂಕುಗಳಲ್ಲಿ ಎಂದಿನಿಂದ ಪ್ರಾರಂಭಿಸುವುದು?

ಇ) ಈ ಕಛೇರಿಗಳನ್ನು ಎಲ್ಲಾ ತಾಲ್ಲೂಕುಗಳಲ್ಲಿ ಪ್ರಾರಂಭಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

ಈ) ಈ ತೊಂದರೆಗಳನ್ನು ಬಗೆಹರಿಸುವ ಉಪಾಯಗಳೇನು?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ.

ಆ) 10 ಇಲಾಖಾ ಸಂಸ್ಥೆಗಳು ಇದ್ದು ಮತ್ತು 50,000 ಕ್ಕೆ ಹೆಚ್ಚಿಗೆ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗ ಜನಸಂಖ್ಯೆ ಇದ್ದ ತಾಲ್ಲೂಕುಗಳಲ್ಲಿ ನಿಗಧಿಪಡಿಸಿದ ಸೂತ್ರದಂತೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಕಛೇರಿಗಳನ್ನು ಪ್ರಾರಂಭಿಸಲಾಗುವುದು.

ಇ) ಮೇಲಿನ ಸೂತ್ರಗಳು ಈಡೇರಿಸಿದಲ್ಲಿ ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳ ಕಛೇರಿಗಳನ್ನು ಪ್ರಾರಂಭಿಸುವಲ್ಲಿ ಸರ್ಕಾರಕ್ಕೆ ಯಾವ ತೊಂದರೆಯೂ ಇರುವುದಿಲ್ಲ.

ಈ) ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳ ಕಛೇರಿಗಳು ಇಲ್ಲದ ಸ್ಥಳಗಳಲ್ಲಿ ಸಮಾಜ ಕಲ್ಯಾಣ ವಿಸ್ತರಣಾಧಿಕಾರಿಯವರು ಈ ಕೆಲಸವನ್ನು ನಿರ್ವಹಿಸುತ್ತಿದ್ದಾರೆ.

**ಮಹಿಳಾ ವೈದ್ಯಾಧಿಕಾರಿಯ ಹುದ್ದೆಯನ್ನು ಭರ್ತಿಮಾಡುವುದು**

3768 - ಶ್ರೀ ಆಂಜನಮೂರ್ತಿ (ನೆಲಮಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಸೇರಿದ ಯಾವ ಯಾವ ಆರೋಗ್ಯ ಕೇಂದ್ರಗಳಲ್ಲಿ ಮಹಿಳಾ ವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇದೆ?